**All India Radio: Bangalore**
**National Bulletin In Kannada**
**11.03.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.03.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಕೇರಳ ಮತ್ತು ತಮಿಳುನಾಡಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ**

**೨. ಕಳೆದ ದಶಕದಲ್ಲಿ ದೇಶದ ಪಳೆಯುಳಿಕೆಯೇತರ ಮೂಲಗಳಿಂದ ಸ್ಥಾಪಿತ ವಿದ್ಯುತ್ ಸಾಮರ್ಥ್ಯ ೨೭೫ ಗಿಗಾವ್ಯಾಟ್‌ಗೆ ಏರಿಕೆ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೩. ಎರಡನೇ ವಾರಕ್ಕೆ ಕಾಲಿಟ್ಟ ಪಶ್ಚಿಮ ಏಷ್ಯಾ ಸಂಘರ್ಷ; ಹರ್ಮುಜ್ ಜಲಸಂಧಿ ಸ್ಥಗಿತದಿಂದ ಟ್ಯಾಂಕರ್ ಸಂಚಾರ ಶೇಕಡ ೮೦ ಕ್ಕೂ ಹೆಚ್ಚು ಕುಸಿತ**

**೪. ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ನ ಅರ್ಹತಾ ಸುತ್ತು; ಬಿ ಗುಂಪಿನ ಅಂತಿಮ ಪಂದ್ಯದಲ್ಲಿ ಇಂದು ಭಾರತ - ವೇಲ್ಸ್ ಮುಖಾಮುಖಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇಂದು ಕೇರಳ ಮತ್ತು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಇಂದು ಮಧ್ಯಾಹ್ನ ಕೇರಳದ ಎರ್ನಾಕುಲಂನಲ್ಲಿ ಅವರು ಸುಮಾರು ೧೦ ಸಾವಿರದ ೮೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಚಾಲನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು ಸಾರ್ವಜನಿಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರಧಾನಿ, ತಮಿಳುನಾಡಿನ ತಿರುಚಿರಾಪಳ್ಳಿಯಲ್ಲಿ ಸುಮಾರು ೫ ಸಾವಿರದ ೭೫೦ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಈ ಯೋಜನೆಗಳು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಮೂಲಸೌಕರ್ಯ, ಗ್ರಾಮೀಣ ಸಂಪರ್ಕ ಮತ್ತು ಹೆದ್ದಾರಿ ಅಭಿವೃದ್ಧಿಯಂತಹ ಪ್ರಮುಖ ವಲಯಗಳನ್ನು ಒಳಗೊಂಡಿವೆ. ಇದರ ಜೊತೆಗೆ ಪ್ರಧಾನಿ ನರೇಂದ್ರ ಮೋದಿ, ಐದು ಹೊಸ ರೈಲು ಸೇವೆಗಳಿಗೆ ಹಸಿರು ನಿಶಾನೆ ತೋರಿಸಲಿದ್ದಾರೆ.

**<>><><*><><<>**

ದೇಶದ ಪಳೆಯುಳಿಕೆಯೇತರ ಮೂಲಗಳಿಂದ ಸ್ಥಾಪಿಸಲಾದ ವಿದ್ಯುತ್ ಸಾಮರ್ಥ್ಯ ಕಳೆದ ದಶಕದಲ್ಲಿ ಗಮನಾರ್ಹವಾಗಿ ಬೆಳೆದಿದ್ದು, ೮೧ ಗಿಗಾವ್ಯಾಟ್‌ನಿಂದ ಸುಮಾರು ೨೭೫ ಗಿಗಾವ್ಯಾಟ್‌ಗೆ ಏರಿದೆ ಎಂದು ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ೪ನೇ ರಾಷ್ಟ್ರೀಯ ಆಗ್ರೋ-ಆರ್‌ಇ ಶೃಂಗಸಭೆಯನ್ನು ಉದ್ದೇಶಿಸಿ

ಮಾತನಾಡಿದ ಅವರು, ಸೌರ ನೀರಾವರಿಯು, ಭಾರತದ ಕೃಷಿ ಮತ್ತು ಇಂಧನ ವಲಯಗಳನ್ನು ಪರಿವರ್ತಿಸುವ ಸಾಮರ್ಥ್ಯವನ್ನು ಹೊಂದಿದೆ. ಈ ತಂತ್ರಜ್ಞಾನ ರೈತರಿಗೆ ಹಗಲಿನ ವೇಳೆಯಲ್ಲಿ ವಿಶ್ವಾಸಾರ್ಹ ನೀರಾವರಿಯನ್ನು ಒದಗಿಸುವ ಮೂಲಕ ಸುಸ್ಥಿರ ಕೃಷಿಯನ್ನು ಬೆಂಬಲಿಸುವ ಜೊತೆಗೆ ದೇಶದ ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ಅವರು ತಿಳಿಸಿದರು. ಪಿಎಂ-ಕುಸುಮ್ ಯೋಜನೆಯಡಿ ೧೦ ಲಕ್ಷಕ್ಕೂ ಹೆಚ್ಚು ಸೌರ ಕೃಷಿ ಪಂಪ್‌ಗಳನ್ನು ಸ್ಥಾಪಿಸಲಾಗಿದೆ ಮತ್ತು ದೇಶಾದ್ಯಂತ ೧೩ ಲಕ್ಷಕ್ಕೂ ಹೆಚ್ಚು ಗ್ರಿಡ್-ಸಂಪರ್ಕಿತ ಪಂಪ್‌ಗಳನ್ನು ಸೌರೀಕರಿಸಲಾಗಿದೆ ಎಂದು ಹೇಳಿದರು. ಪಿಎಂ ಸೂರ್ಯ ಘರ್: ಮುಫ್ತ್ ಬಿಜಲಿ ಯೋಜನೆಯಡಿ ೩೧ ಲಕ್ಷಕ್ಕೂ ಹೆಚ್ಚು ಕುಟುಂಬಗಳು ಮೇಲ್ಛಾವಣಿ ಸೌರ ಅಳವಡಿಕೆಯಿಂದ ಪ್ರಯೋಜನ ಪಡೆದಿವೆ ಎಂದು ಅವರು ಮಾಹಿತಿ ನೀಡಿದರು. ಸರ್ಕಾರವು ಪಿಎಂ-ಕುಸುಮ್ ೨.೦ ಅನ್ನು ಸಿದ್ಧಪಡಿಸುತ್ತಿದ್ದು, ಇದು ಬೆಳೆಗಳ ಜೊತೆಗೆ ಸೌರ ಫಲಕಗಳ ಅಳವಡಿಕೆಯನ್ನು ಉತ್ತೇಜಿಸಲು ೧೦ ಗಿಗಾವ್ಯಾಟ್ ಅಗ್ರಿ-ಪಿವಿ ಘಟಕವನ್ನು ಒಳಗೊಂಡಿರುತ್ತದೆ ಎಂದು ಸಚಿವರು ತಿಳಿಸಿದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಕೇಂದ್ರ ಸಚಿವ ಸಂಪುಟ ಸಭೆ, ’ಜಲ ಜೀವನ್ ಮಿಷನ್’ ಯೋಜನೆಯನ್ನು ಡಿಸೆಂಬರ್ ೨೦೨೮ರವರೆಗೆ ವಿಸ್ತರಿಸಲು ಅನುಮೋದನೆ ನೀಡಿದೆ.  ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯ ಅನುಷ್ಠಾನವನ್ನು ಮೂಲಸೌಕರ್ಯ ನಿರ್ಮಾಣದಿಂದ ’ಸೇವಾ ವಿತರಣೆ’ಗೆ ಮರುಹೊಂದಿಸುವ ಜಲಶಕ್ತಿ ಸಚಿವಾಲಯದ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ಎಂದು ತಿಳಿಸಿದರು. ಇದಕ್ಕಾಗಿ ಒಟ್ಟು ೮.೬೯ ಲಕ್ಷ ಕೋಟಿ ರೂಪಾಯಿಗಳ ವೆಚ್ಚವನ್ನು ಅಂದಾಜಿಸಲಾಗಿದ್ದು, ಕೇಂದ್ರ ಸರ್ಕಾರದ ಪಾಲನ್ನು ೩.೫೯ ಲಕ್ಷ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ ಎಂದರು.  ಸಚಿವ ಸಂಪುಟವು ತಮಿಳುನಾಡಿನ ಮದುರೈ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವೆಂದು ಘೋಷಿಸಲು ಒಪ್ಪಿಗೆ ನೀಡಿದೆ. ದಕ್ಷಿಣ ತಮಿಳುನಾಡಿನ ಪ್ರಮುಖ ಪ್ರವೇಶ ದ್ವಾರವಾಗಿರುವ ಈ ನಿಲ್ದಾಣಕ್ಕೆ ಅಂತಾರಾಷ್ಟ್ರೀಯ ಸ್ಥಾನಮಾನ ನೀಡುವುದರಿಂದ ಪ್ರವಾಸೋದ್ಯಮ, ವ್ಯಾಪಾರ ಮತ್ತು ಪ್ರಾದೇಶಿಕ ಆರ್ಥಿಕ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ದೊರಕಲಿದೆ.

**<>><><*><><<>**

ದೇಶೀಯ ಗ್ರಾಹಕರಿಗೆ ಯಾವುದೇ ಇಂಧನ ಕೊರತೆಯಿಲ್ಲ ಹಾಗೂ ಈ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಭರವಸೆ ನೀಡಿದ್ದಾರೆ.  ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ಭಾರತದ ಇಂಧನ ಆಮದು ಪ್ರಕ್ರಿಯೆ ವಿವಿಧ ಮೂಲಗಳು ಹಾಗೂ ಮಾರ್ಗಗಳ ಮೂಲಕ ನಿರಂತರವಾಗಿ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.  ಪಶ್ಚಿಮ ಏಷ್ಯದ ಪ್ರಸ್ತುತ ಪರಿಸ್ಥಿತಿಯ ನಡುವೆ ದೇಶೀಯ ಗ್ರಾಹಕರಿಗೆ ಸಿಎನ್‌ಜಿ ಮತ್ತು ಪಿಎನ್‌ಜಿ ಪೂರೈಕೆಯಲ್ಲಿ ಯಾವುದೇ

ವ್ಯತ್ಯಯವಾಗದಂತೆ ಸರಬರಾಜು ಖಚಿತಪಡಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ ಎಂದು ತಿಳಿಸಿದ್ದಾರೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಎರಡನೇ ವಾರಕ್ಕೆ ಕಾಲಿಡುತ್ತಿದ್ದಂತೆ, ಹಾರ್ಮುಜ್ ಜಲಸಂಧಿಯ ಮೂಲಕ ನಡೆಯುವ ವಾಣಿಜ್ಯ ಹಡಗುಗಳ ಸಂಚಾರವು ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಟ್ಯಾಂಕರ್ ಸಂಚಾರದಲ್ಲಿ ಶೇಕಡಾ ಲಂಕ್ಕೂ ಹೆಚ್ಚು ಕುಸಿತ ಕಂಡುಬಂದಿದ್ದು, ಸುಮಾರು ೧೯ ಶತಕೋಟಿ ಲೀಟರ್ ತೈಲವನ್ನು ಹೊತ್ತಿರುವ ೧೫೦ ಟ್ಯಾಂಕರ್‌ಗಳು ಜಲಸಂಧಿಯ ಹೊರಭಾಗದ ಸಮುದ್ರದಲ್ಲಿ ಪರಿಸ್ಥಿತಿ ತಿಳಿಯಾಗುವುದನ್ನೇ ಕಾಯುತ್ತಾ ನಿಂತಿವೆ. ಈ ಭಾಗದಲ್ಲಿ ಕನಿಷ್ಠ ಹತ್ತು ವಾಣಿಜ್ಯ ಹಡಗುಗಳ ಮೇಲೆ ಡ್ರೋನ್ ಅಥವಾ ಕ್ಷಿಪಣಿ ದಾಳಿ ನಡೆದ ವರದಿಯಾಗಿದ್ದು, ಪರ್ಷಿಯನ್ ಕೊಲ್ಲಿಯಾದ್ಯಂತ ಜಿಪಿಎಸ್ ಸಿಗ್ನಲ್‌ಗಳ ಜಾಮಿಂಗ್ ಪ್ರಕ್ರಿಯೆಯು ಸಂಚಾರದ ಅಪಾಯವನ್ನು ಮತ್ತಷ್ಟು ಹೆಚ್ಚಿಸಿದೆ. ಈ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ವಾಣಿಜ್ಯ ಹಡಗುಗಳಿಗೆ ರಕ್ಷಣೆ ನೀಡಲು ಫ್ರಾನ್ಸ್ ದೇಶವು ಐರೋಪ್ಯ ನೌಕಾಪಡೆಯ ನೇತೃತ್ವ ವಹಿಸಿದೆ. ವಾಣಿಜ್ಯ ನೌಕೆಗಳಿಗೆ ಬೆಂಗಾವಲಾಗಿ ನಿಲ್ಲಲು ವಿಶೇಷ ಒಕ್ಕೂಟವನ್ನು ರಚಿಸುವುದಾಗಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಘೋಷಿಸಿದ್ದಾರೆ. ಇದು ಕೇವಲ ರಕ್ಷಣಾತ್ಮಕ ಕಾರ್ಯಾಚರಣೆಯಾಗಿದ್ದು, ಪ್ರಸ್ತುತ ಇರುವ 'ಆಪರೇಷನ್ ಅಜೆನಾರ್' ನೌಕಾ ಭದ್ರತಾ ಮಿಷನ್‌ನ ತುರ್ತು ವಿಸ್ತರಣೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ಕಾರ್ಯಾಚರಣೆಗಾಗಿ ಫ್ರಾನ್ಸ್ ತನ್ನ ಪ್ರಮುಖ ಯುದ್ಧನೌಕೆ 'ಚಾರ್ಲ್ಸ್ ಡಿ ಗೌಲ್' ಸೇರಿದಂತೆ ಎಂಟು ಫ್ರಿಗೇಟ್‌ಗಳು ಮತ್ತು ಎರಡು ಹೆಲಿಕಾಪ್ಟರ್ ವಾಹಕ ನೌಕೆಗಳನ್ನು ನಿಯೋಜಿಸಿದೆ. ಗ್ರೀಸ್, ಸೈಪ್ರಸ್ ಮತ್ತು ನೆದರ್ಲ್ಯಾಂಡ್ಸ್ ದೇಶಗಳು ಈ ಮಿಷನ್‌ನಲ್ಲಿ ಭಾಗವಹಿಸುವುದನ್ನು ಖಚಿತಪಡಿಸಿವೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಎರಡನೇ ವಾರಕ್ಕೆ ಕಾಲಿಡುತ್ತಿದ್ದಂತೆ, ಹಾರ್ಮುಜ್ ಜಲಸಂಧಿಯ ಮೂಲಕ ನಡೆಯುವ ವಾಣಿಜ್ಯ ಹಡಗುಗಳ ಸಂಚಾರವು ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಟ್ಯಾಂಕರ್ ಸಂಚಾರದಲ್ಲಿ ಶೇಕಡಾ ಲಂಕ್ಕೂ ಹೆಚ್ಚು ಕುಸಿತ ಕಂಡುಬಂದಿದ್ದು, ಸುಮಾರು ೧೯ ಶತಕೋಟಿ ಲೀಟರ್ ತೈಲವನ್ನು ಹೊತ್ತಿರುವ ೧೫೦ ಟ್ಯಾಂಕರ್‌ಗಳು ಜಲಸಂಧಿಯ ಹೊರಭಾಗದ ಸಮುದ್ರದಲ್ಲಿ ಪರಿಸ್ಥಿತಿ ತಿಳಿಯಾಗುವುದನ್ನೇ ಕಾಯುತ್ತಾ ನಿಂತಿವೆ. ಈ ಭಾಗದಲ್ಲಿ ಕನಿಷ್ಠ ಹತ್ತು ವಾಣಿಜ್ಯ ಹಡಗುಗಳ ಮೇಲೆ ಡ್ರೋನ್ ಅಥವಾ ಕ್ಷಿಪಣಿ ದಾಳಿ ನಡೆದ ವರದಿಯಾಗಿದ್ದು, ಪರ್ಷಿಯನ್ ಕೊಲ್ಲಿಯಾದ್ಯಂತ ಜಿಪಿಎಸ್ ಸಿಗ್ನಲ್‌ಗಳ ಜಾಮಿಂಗ್ ಪ್ರಕ್ರಿಯೆಯು ಸಂಚಾರದ ಅಪಾಯವನ್ನು ಮತ್ತಷ್ಟು ಹೆಚ್ಚಿಸಿದೆ. ಈ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ವಾಣಿಜ್ಯ ಹಡಗುಗಳಿಗೆ ರಕ್ಷಣೆ ನೀಡಲು ಫ್ರಾನ್ಸ್ ದೇಶವು ಐರೋಪ್ಯ ನೌಕಾಪಡೆಯ ನೇತೃತ್ವ ವಹಿಸಿದೆ. ವಾಣಿಜ್ಯ ನೌಕೆಗಳಿಗೆ ಬೆಂಗಾವಲಾಗಿ ನಿಲ್ಲಲು ವಿಶೇಷ ಒಕ್ಕೂಟವನ್ನು ರಚಿಸುವುದಾಗಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಘೋಷಿಸಿದ್ದಾರೆ. ಇದು ಕೇವಲ ರಕ್ಷಣಾತ್ಮಕ ಕಾರ್ಯಾಚರಣೆಯಾಗಿದ್ದು, ಪ್ರಸ್ತುತ ಇರುವ

’ಆಪರೇಷನ್ ಅಜೆನಾರ್’ ನೌಕಾ ಭದ್ರತಾ ಮಿಷನ್‌ನ ತುರ್ತು ವಿಸ್ತರಣೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ಕಾರ್ಯಾಚರಣೆಗಾಗಿ ಫ್ರಾನ್ಸ್ ತನ್ನ ಪ್ರಮುಖ ಯುದ್ಧನೌಕೆ ’ಚಾರ್ಲ್ಸ್ ಡಿ ಗೌಲ್’ ಸೇರಿದಂತೆ ಎಂಟು ಫ್ರಿಗೇಟ್‌ಗಳು ಮತ್ತು ಎರಡು ಹೆಲಿಕಾಪ್ಟರ್ ವಾಹಕ ನೌಕೆಗಳನ್ನು ನಿಯೋಜಿಸಿದೆ. ಗ್ರೀಸ್, ಸೈಪ್ರಸ್ ಮತ್ತು ನೆದರ್ಲ್ಯಾಂಡ್ಸ್ ದೇಶಗಳು ಈ ಮಿಷನ್‌ನಲ್ಲಿ ಭಾಗವಹಿಸುವುದನ್ನು ಖಚಿತಪಡಿಸಿವೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಇತ್ತೀಚಿನ ಬೆಳವಣಿಗೆಗಳ ಕುರಿತು ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಾಘ್ಚಿ ಅವರೊಂದಿಗೆ ನಿನ್ನೆ ಸಂಜೆ ವಿವರವಾದ ದೂರವಾಣಿ ಮಾತುಕತೆ ನಡೆಸಿದರು. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಡಾ.ಎಸ್.ಜೈಶಂಕರ್, ಮುಂದೆಯೂ ಪರಸ್ಪರ ಸಂಪರ್ಕದಲ್ಲಿರಲು ಇಬ್ಬರೂ ಒಪ್ಪಿಕೊಂಡಿರುವುದಾಗಿ ತಿಳಿಸಿದ್ದಾರೆ. ಕಳೆದ ತಿಂಗಳು ಇರಾನ್ ಮತ್ತು ಅಮೆರಿಕಾ-ಇಸ್ರೇಲ್ ಸಂಯುಕ್ತ ಪಡೆಗಳ ಜೊತೆ ಸಂಘರ್ಷ ಆರಂಭವಾದ ಬಳಿಕ ಇವರಿಬ್ಬರ ನಡುವಿನ ಮೂರನೇ ದೂರವಾಣಿ ಮಾತುಕತೆ ಇದಾಗಿದೆ. ಡಾ.ಜೈಶಂಕರ್ ಅವರು ಜರ್ಮನಿಯ ವಿದೇಶಾಂಗ ಸಚಿವ ಯೋಹಾನ್ ವಾಡೆಫುಲ್ ಹಾಗೂ ದಕ್ಷಿಣ ಕೊರಿಯಾದ ವಿದೇಶಾಂಗ ಸಚಿವ ಚೋ ಹ್ಯುನ್ ಅವರೊಂದಿಗೂ ದೂರವಾಣಿ ಮೂಲಕ ಮಾತುಕತೆ ನಡೆಸಿ, ಪಶ್ಚಿಮ ಏಷ್ಯಾದ ಪರಿಸ್ಥಿತಿಯ ಕುರಿತು ಚರ್ಚಿಸಿದರು.

<>><><*><><<>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಹಾಗೂ ಅದರಿಂದ ವಿಮಾನ ಸಂಚಾರದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ನಾಗರಿಕ ವಿಮಾನಯಾನ ಸಚಿವಾಲಯ ನಿಕಟವಾಗಿ ಮೇಲ್ವಿಚಾರಣೆ ನಡೆಸುತ್ತಿದೆ. ಪ್ರಯಾಣಿಕರ ಸುರಕ್ಷತೆ ಹಾಗೂ ಸೇವೆಗಳ ನಿರಂತರತೆ ಮುಖ್ಯ ಆದ್ಯತೆಯಾಗಿದ್ದು, ವಿಮಾನಯಾನ ಸಂಸ್ಥೆಗಳು ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿವೆ ಎಂದು ಸಚಿವಾಲಯ ತಿಳಿಸಿದೆ. ಪಶ್ಚಿಮ ಏಷ್ಯಾದಿಂದ ಭಾರತೀಯ ವಿಮಾನಯಾನ ಸಂಸ್ಥೆಗಳ ೪೫ ವಿಮಾನಗಳು ಭಾರತಕ್ಕೆ ಆಗಮಿಸಿದ್ದು, ಅವುಗಳಲ್ಲಿ ೭ ಸಾವಿರದ ೪೦೭ ಪ್ರಯಾಣಿಕರು ಬಂದಿದ್ದಾರೆ. ಏರ್ ಇಂಡಿಯಾ, ಏರ್ ಇಂಡಿಯಾ ಎಕ್ಸ್‌ಪ್ರೆಸ್ ಮತ್ತು ಇಂಡಿಗೋ ಸಂಸ್ಥೆಗಳು ನಾಳೆಯಿಂದ ರಿಯಾದ್‌ಗೆ ವಿಮಾನ ಸೇವೆಗಳನ್ನು ಆರಂಭಿಸಲಿವೆ. ಪ್ರಯಾಣಿಕರು ವಿಮಾನ ವೇಳಾಪಟ್ಟಿಯ ಇತ್ತೀಚಿನ ಮಾಹಿತಿಗಾಗಿ ತಮ್ಮ ವಿಮಾನಯಾನ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿರಲು ಸಚಿವಾಲಯ ಸಲಹೆ ನೀಡಿದೆ.

<>><><*><><<>

ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್, ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷವನ್ನು ಸಾಧ್ಯವಾದಷ್ಟು ಬೇಗ ಶಮನಗೊಳಿಸಿ, ರಾಜಕೀಯ ಮಾರ್ಗದ ಮೂಲಕ ಪರಿಹರಿಸಬೇಕೆಂಬ

ತಮ್ಮ ದೇಶದ ನಿಲುವನ್ನು ಪುನರುಚ್ಚರಿಸಿದ್ದಾರೆ. ಇರಾನ್ ಅಧ್ಯಕ್ಷ ಮಸೂದ್ ಪೆಝೆಷ್ಕಿಯನ್ ಅವರೊಂದಿಗೆ ದೂರವಾಣಿ ಮೂಲಕ ನಡೆಸಿದ ಮಾತುಕತೆಯಲ್ಲಿ ಅವರು, ಈ ಅಭಿಪ್ರಾಯ ವ್ಯಕ್ತಪಡಿಸಿದರು. ಸ್ಥಿರತೆ ಸಾಧಿಸಲು ಸಂವಾದ ಮತ್ತು ರಾಜಕೀಯ ಪರಿಹಾರವೇ ಏಕೈಕ ಮಾರ್ಗವೆಂದು ರಷ್ಯಾ ನಂಬಿದೆ ಎಂದು ಅಧ್ಯಕ್ಷ ಪುಟಿನ್ ಹೇಳಿದ್ದಾರೆ. ಪರಿಸ್ಥಿತಿ ಮತ್ತಷ್ಟು ತೀವ್ರಗೊಳ್ಳುವುದಕ್ಕೆ ವಿರೋಧ ವ್ಯಕ್ತಪಡಿಸಿದ ಅವರು, ಈ ಸಂಕಷ್ಟವು ಮಧ್ಯಪ್ರಾಚ್ಯ ಪ್ರದೇಶದಲ್ಲಿ ಮತ್ತಷ್ಟು ವಿಸ್ತರಿಸದಂತೆ ತಡೆಯುವ ಅಗತ್ಯವನ್ನೂ ಒತ್ತಿ ಹೇಳಿದರು. ಸಂಕಷ್ಟದ ಸಂದರ್ಭದಲ್ಲಿ ಇರಾನ್‌ಗೆ ಮಾನವೀಯ ನೆರವು ಸೇರಿದಂತೆ ರಷ್ಯಾ ನೀಡುತ್ತಿರುವ ಬೆಂಬಲಕ್ಕಾಗಿ ಅಧ್ಯಕ್ಷ ಪೆಝೆಷ್ಕಿಯನ್ ಕೃತಜ್ಞತೆ ವ್ಯಕ್ತಪಡಿಸಿದರು.

**<>><><*><><<>**

ಹೈದರಾಬಾದ್‌ನಲ್ಲಿ ಇಂದು ನಡೆಯಲಿರುವ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ ರ ಅರ್ಹತಾ ಪಂದ್ಯಾವಳಿಯ ಬಿ ಗುಂಪಿನ ಅಂತಿಮ ಪಂದ್ಯದಲ್ಲಿ ಭಾರತದ ಮಹಿಳಾ ತಂಡ, ವೇಲ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಈವರೆಗೆ ಅರ್ಹತಾ ಸುತ್ತಿನಲ್ಲಿ ನಾಲ್ಕು ಅಂಕಗಳೊಂದಿಗೆ ಬಿ ಗುಂಪಿನ ಅಂಕಪಟ್ಟಿಯಲ್ಲಿ ಭಾರತ ಅಗ್ರಸ್ಥಾನದಲ್ಲಿದೆ. ಅಂಕಪಟ್ಟಿಯ ಅಗ್ರ ಎರಡು ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಗಳಿಸಲಿದ್ದು, ಈ ಹಿನ್ನೆಲೆಯಲ್ಲಿ ಭಾರತ ತಂಡಕ್ಕೆ ವೇಲ್ಸ್ ತಂಡದೊಂದಿಗಿನ ಪಂದ್ಯ ಪ್ರಮುಖವಾಗಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**